RNU AIR DHARWAD

**JANUARY 28, 2026**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ರಾಜ್ಯದಲ್ಲಿ ಅಪರಾಧಗಳನ್ನು** ನಿಯಂತ್ರಿಸಲು ಸರ್ಕಾರದಿಂದ ಅಗತ್ಯ ಕ್ರಮ–ಗೃಹ ಸಚಿವರಿಂದ ವಿಧಾನಸಭೆಯಲ್ಲಿ ಹೇಳಿಕೆ.

- **ಕಲಬುರಗಿ ಜಿಲ್ಲೆಯ ಸಮಗ್ರ** ಅಭಿವೃದ್ಧಿಗೆ 296 ಕೋಟಿ ವೆಚ್ಚದ ನೀಲನಕ್ಷೆ ಸಿದ್ಧ–ಜಿಲ್ಲಾ ಉಸ್ತುವಾರಿ ಸಚಿವರಿಂದ ಮಾಹಿತಿ.

- **ತೋಟಗಾರಿಕಾ ಬೆಳೆಗಳು** ಬೇಗನೆ ಹಾಳಾಗುವುದನ್ನು ತಪ್ಪಿಸಲು ಶೈತ್ಯಾಗಾರ ಘಟಕಗಳ ನಿರ್ಮಾಣಕ್ಕೆ ಉತ್ತೇಜನ–ಕೃಷಿ ಸಚಿವರ ಹೇಳಿಕೆ.

- **ಭಾರತ–ಯುರೋಪ್ ಒಕ್ಕೂಟ** ಮುಕ್ತ ವ್ಯಾಪಾರ ಒಪ್ಪಂದ: ರಾಜ್ಯದ ಕೈಗಾರಿಕಾ ಬೆಳವಣಿಗೆಗೆ ಮಹತ್ವದ ಅವಕಾಶ–ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅಭಿಮತ.

**ಈಗ ವಾರ್ತೆಗಳ ವಿವರ**

*******

**ರಾಜ್ಯದಲ್ಲಿ ಅಪರಾಧಗಳನ್ನು** ನಿಯಂತ್ರಿಸಲು ಸರ್ಕಾರ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದ್ದಾರೆ. ವಿಧಾನಸಭೆಯಲ್ಲಿ ನಂಜನಗೂಡು ಶಾಸಕ ಧೃವನಾರಾಯಣ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪ್ರತಿ ಜಿಲ್ಲೆಯಲ್ಲೂ ರಾತ್ರಿ ಹಾಗೂ ಹಗಲು ಗಸ್ತುಗಳನ್ನು ನಿರಂತರವಾಗಿ ನಿರ್ವಹಿಸಿ ಯಾವುದೇ ಅಪರಾಧ ಚಟುವಟಿಕೆಗಳು ನಡೆಯದಂತೆ ಮುಂಜಾಗೃತಾ ಕ್ರಮ ವಹಿಸಲಾಗಿದೆ ಎಂದರು. ಕಳೆದ ಸಾಲಿಗೆ ಹೋಲಿಸಿದ್ದಲ್ಲಿ, ನಂಜನಗೂಡು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಅಪರಾಧ ಪ್ರಕರಣಗಳು ಕಡಿಮೆಯಾಗಿವೆ. ಮೈಸೂರು ಜಿಲ್ಲೆ ಹಾಗೂ ಹೊರ ಜಿಲ್ಲೆಯ ಗಡಿ ಭಾಗಗಳಲ್ಲಿ ಚೆಕ್ ಪೋಸ್ಟ್‌ಗಳನ್ನು ರಚಿಸಲಾಗಿದ್ದು, ಶಸ್ತ್ರಾಸ್ತ್ರ ಸಹಿತ ಅಧಿಕಾರಿ ಮತ್ತು ಸಿಬ್ಬಂದಿ ನಿಯೋಜಿಸಿ ಅಪರಾಧ ಚಟುವಟಿಕೆಗಳು ನಡೆಯದಂತೆ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಹಿಂದೆ ಅಪರಾಧ ಪ್ರಕರಣಗಳಲ್ಲಿ ಭಾಗಿಯಾದವರ ಚಲನ ವಲನಗಳ ಮೇಲೆ ನಿಗಾ ಇಡಲಾಗಿದೆ ಎಂದು ಡಾ.ಪರಮೇಶ್ವರ್ ಉತ್ತರಿಸಿದರು.

*******

**ಬಾಗಲಕೋಟೆ ಜಿಲ್ಲೆ ಹಿಪ್ಪರಗಿ** ಬ್ಯಾರೇಜ್‌ನಲ್ಲಿ ಲಭ್ಯವಾಗುವ ನೀರಿನ ಸಂಗ್ರಹಣೆಯ ಪ್ರಮಾಣದಲ್ಲಿ ಸಮರ್ಪಕ ಹಾಗೂ ನಿಯಂತ್ರಿತ ಬಳಕೆ ಸಾಧಿಸಿ, ನೀರು ಪೋಲಾಗುವುದನ್ನು ತಡೆಗಟ್ಟಲು ಕ್ರಮ ವಹಿಸಲಾಗುವುದು ಎಂದು ಕಂದಾಯ ಸಚಿವರ ಕೃ ಣ್ಣೀ ಬೈರೇಗೌಡ ತಿಳಿಸಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ತೇರದಾಳ ಶಾಸಕ ಸಿದ್ದು ಸವದಿ ಅವರ ಪ್ರಶ್ನೆಗೆ ಉಪಮುಖ್ಯಮಂತ್ರಿಗಳ ಪರವಾಗಿ ಉತ್ತರಿಸಿದ ಸಚಿವರು, ಮುಂದಿನ ದಿನಗಳಲ್ಲಿ ಕುಡಿಯುವ ನೀರು ಹಾಗೂ ರೈತರ ಬೆಳೆ ಸಂರಕ್ಷಿಸಲು ನೀರನ್ನು ಪೂರೈಸಲಾಗುವುದು. ಹಿಪ್ಪರಗಿ ಬ್ಯಾರೇಜಿನಲ್ಲಿ ಪ್ರಸ್ತುತ ಒಳ ಹರಿವು ಸುಮಾರು 450 ಕ್ಯೂಸೆಕ್ಸ್‌ನಷ್ಟಿದ್ದು, ಇದರಿಂದ ಮುಂದಿನ ದಿನಗಳಲ್ಲಿ ಹೆಚ್ಚಿನ ಪ್ರಮಾಣದ ನೀರಿನ ಸಂಗ್ರಹಣೆ ಸಾಧ್ಯವಾಗಲಿದೆ ಎಂದರು. ಮುಂಬರುವ ಬೇಸಿಗೆಯಲ್ಲಿ ಕುಡಿಯುವ ನೀರಿನ ಕೊರತೆ ಉಂಟಾದಲ್ಲಿ ಮಹಾರಾಷ್ಟ್ರದ ವಾರಣಾ ಅಥವಾ ಕೊಯ್ನಾ ಜಲಾಶಯಗಳಿಂದ ಹಿಪ್ಪರಗಿ ಬ್ಯಾರೇಜಿಗೆ ಅವಶ್ಯವಿರುವ ನೀರು ಪಡೆಯಲು ಸಹ ಕ್ರಮ ವಹಿಸಲಾಗುವುದು ಎಂದು ಸಚಿವರು ತಿಳಿಸಿದರು.

*******

**ಕಲಬುರಗಿ ಜಿಲ್ಲೆಯ ಸಮಗ್ರ** ಅಭಿವೃದ್ಧಿಗೆ 'ಸ್ವಚ್ಛ ಕಲಬುರಗಿ, ಶಾಶ್ವತ ಸಮೃದ್ಧಿ' ಯೋಜನೆಯಡಿ 296 ಕೋಟಿ ವೆಚ್ಚದ ನೀಲನಕ್ಷೆ ತಯಾರಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕಲಬುರಗಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ 63 ರಸ್ತೆಗಳ ಅಭಿವೃದ್ದಿಗೆ 116 ಕೋಟಿ, ನಗರ ವ್ಯಾಪ್ತಿಯ 33 ಉದ್ಯಾನವನಗಳ ಅಭಿವೃದ್ದಿಗೆ 22.4 ಕೋಟಿ, 25 ಸರ್ಕಲ್‌ಗಳ ಅಭಿವೃದ್ದಿಗೆ 13.4 ಕೋಟಿ, 4 ಕೆರೆಗಳ ಅಭಿವೃದ್ಧಿ ಹಾಗೂ ಜಲಮೂಲಗಳ ಸಂರಕ್ಷಣೆಗೆ 39.3 ಕೋಟಿ ಮತ್ತು ಘನತ್ಯಾಜ್ಯ ಸಂಸ್ಕರಣೆ ಹಾಗೂ ವಿಲೇವಾರಿಗೆ 55.7 ಕೋಟಿ ಸೇರಿದಂತೆ ವಿವಿಧ ಯೋಜನೆಗಳಿಗೆ 296 ಕೋಟಿ ಅನುದಾನ ವಿನಿಯೋಗಿಸಲಾಗುತ್ತಿದೆ. ಈ ಯೋಜನೆಗಳಿಗಾಗಿ ಈಗಾಗಲೇ ಟೆಂಡರ್ ಕರೆಯಲಾಗಿದೆ ಎಂದು ಸಚಿವರು ಹೇಳಿದರು.

*******

**ಮೈಸೂರು ಜಿಲ್ಲೆಯ ಯಾವುದೇ** ಪುರಸಭೆಗಳಲ್ಲಿ ಟೆಂಡರ್ ಕರೆಯುವುದು ಬಾಕಿ ಇಲ್ಲ ಎಂದು ಪೌರಾಡಳಿತ ಹಾಗೂ ಸಚಿವ ರಹೀಂ ಖಾನ್ ತಿಳಿಸಿದ್ದಾರೆ. ವಿಧಾನಪರಿಷತ್ತಿನಲ್ಲಿ ಸದಸ್ಯ ಸಿ.ಎನ್. ಮಂಜೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಟೆಂಡರ್ ಪ್ರಕ್ರಿಯೆಯಲ್ಲಿ ಯಾವುದೇ ವಿಳಂಬವಾಗಿಲ್ಲ. ಜಿಲ್ಲೆಯ 13 ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮುಖ್ಯಮಂತ್ರಿ ಅಮೃತ ನಗರೋತ್ಥಾನ ಯೋಜನೆ ಹಂತ 4 ರಡಿ ಅನುದಾನ ಬಿಡುಗಡೆ ಮಾಡಲಾಗಿದೆ ಹಾಗೂ ಕಾಮಗಾರಿಗಳನ್ನು ಸಹ ಕೈಗೊಳ್ಳಲಾಗಿದೆ. ಬಾಕಿ ಇರುವ ಕಾಮಗಾರಿಗಳನ್ನು ನಿಗಧಿಪಡಿಸಲಾದ ಕಾಲಾವಧಿಯೊಳಗೆ ಪೂರ್ಣಗೊಳಿಸಲಾಗುವುದು ಎಂದು ಸಚಿವರು ತಿಳಿಸಿದರು.

*******

**ತೋಟಗಾರಿಕಾ ಬೆಳೆಗಳು** ಬೇಗನೆ ಹಾಳಾಗುವುದನ್ನು ತಪ್ಪಿಸಲು ಶೈತ್ಯಾಗಾರ ಘಟಕಗಳನ್ನು ನಿರ್ಮಿಸಲು ಉತ್ತೇಜನ ನೀಡಲಾಗುತ್ತಿದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ. ವಿಧಾನ ಪರಿಷತ್ತಿನಲ್ಲಿ ಸದಸ್ಯ ತಿಪ್ಪಣ್ಣ ಕಮಕನೂರ ಅವರ ಪ್ರಶ್ನೆಗೆ ತೋಟಗಾರಿಕಾ ಸಚಿವರ ಪರವಾಗಿ ಉತ್ತರಿಸಿದ ಸಚಿವರು, ಈಗಾಗಲೇ ವಿವಿಧ ಜಿಲ್ಲೆಗಳಲ್ಲಿ 11 ಶೈತ್ಯಾಗಾರ ಘಟಕಗಳನ್ನು

ನಿರ್ಮಿಸಲಾಗಿದೆ. ಸಮಗ್ರ ತೋಟಗಾರಿಕೆ ಅಭಿವೃದ್ಧಿ ಮಿ ನ್ ರಾಷ್ಟ್ರೀಯ ತೋಟಗಾರಿಕೆ ಯೋಜನೆಯಡಿ ರೈತರು, ಉದ್ದಿಮೆದಾರರು, ರೈತ ಉತ್ಪಾದಕ ಸಂಸ್ಥೆಗಳಿಗೆ ಶೈತ್ಯಾಗಾರ, ನಿರ್ಮಿಸಲು ಉತ್ತೇಜನ ನೀಡಲಾಗುತ್ತಿದೆ ಎಂದರು.

*******

**ರಾಜ್ಯದಲ್ಲಿ ಜವಳಿ ಕ್ಷೇತ್ರವನ್ನು** ಉತ್ತೇಜಿಸಲು ನೂತನ ಜವಳಿ ಮತ್ತು ಸಿದ್ಧ ಉಡುಪು ನೀತಿ ಜಾರಿಗೊಳಿಸಲಾಗುವುದು ಎಂದು ಜವಳಿ ಖಾತೆ ಸಚಿವ ಸಚಿವ ಶಿವಾನಂದ ಪಾಟೀಲ ಹೇಳಿದ್ದಾರೆ. ವಿಧಾನ ಪರಿಷತ್ತಿನಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ನೂತನ ಜವಳಿ ನೀತಿ ಅನು ಠಾನಗೊಳಿಸಲು ರಚಿಸಲಾದ ಉನ್ನತಮಟ್ಟದ ತಜ್ಞರ ಸಮಿತಿ ಮಾರ್ಗಸೂಚಿಗಳನ್ನು ನಿಗದಿಪಡಿಸಿದ್ದು ಅದರನ್ವಯ, ಕರಡು ಜವಳಿ ನೀತಿ ತಯಾರಿಸಲು ಕೆ.ಪಿ.ಎಂ.ಜಿ. ಅಡ್ವೈಸರಿ ಕನ್ಸಲ್ಟೆಂಟ್ ಸರ್ವೀಸ್ ಸಂಸ್ಥೆಯನ್ನು ನೇಮಕ ಮಾಡಲಾಗಿದೆ. ಕರಡು ನೀತಿಯನ್ನು ಸಿದ್ಧಪಡಿಸಲು ಅಗತ್ಯ ಕ್ರಮವಹಿಸಲಾಗಿದೆ ಎಂದು ಸಚಿವರು ಹೇಳಿದರು.

*******

**ಧಾರವಾಡ ಜಿಲ್ಲೆ ನವಲಗುಂದ** ಸಮೀಪದ ಬೆಣ್ಣೆ ಹಳ್ಳಕ್ಕೆ ತಡೆಗೋಡೆ ನಿರ್ಮಿಸುವ ಮಹತ್ವದ ಯೋಜನೆಗೆ ಫೆಬ್ರುವರಿ 8 ರಂದು ಮುಖ್ಯಮಂತ್ರಿ ಚಾಲನೆ ನೀಡಲಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ತಿಳಿಸಿದ್ದಾರೆ. ಶಿರಗುಪ್ಪಿಯಲ್ಲಿ ಆಯೋಜಿಸಿರುವ ಶಂಕುಸ್ಥಾಪನೆ ಕಾರ್ಯಕ್ರಮದ ರೂಪುರೇ ಗಳ ಕುರಿತು ಧಾರವಾಡದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಮತ್ತು ಅನೇಕ ಸಚಿವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಬೆಣ್ಣೆ ಹಳ್ಳದ ಪ್ರವಾಹದಿಂದ ಈ ಭಾಗದ ರೈತರು ಹಾಗೂ ಗ್ರಾಮಸ್ಥರು ಪ್ರತಿವ ರ್ ಸಂಕ ಟ ಅನುಭವಿಸುತ್ತಿದ್ದಾರೆ. ಇದಕ್ಕೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ತಡೆಗೋಡೆ ನಿರ್ಮಾಣ ಮಾಡಲಾಗುತ್ತಿದೆ ಎಂದು ಅವರು ಹೇಳಿದರು.

*******

**ಬೆಂಗಳೂರಿನ ಕಿದ್ವಾಯಿ ಆಸ್ಪತ್ರೆ** ದೇಶದಲ್ಲಿಯೇ 5 ನೇ ಅತ್ಯುತ್ತಮ ಆಸ್ಪತ್ರೆ ಎನ್ನುವ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾಕ್ಟರ್ ಶರಣ ಪ್ರಕಾಶ ಪಾಟೀಲ ತಿಳಿಸಿದ್ದಾರೆ. ಈ ಕುರಿತು ಎಕ್ಸ್ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಸರ್ಕಾರಿ ಆಸ್ಪತ್ರೆಗಳ ಸಾಲಿನಲ್ಲಿ ದೇಶದಲ್ಲಿಯೇ 3 ನೇ ಸ್ಥಾನ, ಜೊತೆಗೆ ರಾಜ್ಯದಲ್ಲಿ ನಂಬರ್ 1 ಸ್ಥಾನ ಪಡೆದ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದಿದ್ದಾರೆ.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–42 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಭಾರತ–ಯುರೋಪ್ ಒಕ್ಕೂಟ** ಮುಕ್ತ ವ್ಯಾಪಾರ ಒಪ್ಪಂದ ಕರ್ನಾಟಕಕ್ಕೆ ರಫ್ತು ವಿಸ್ತಾರ ಹೆಚ್ಚಿಸಿ ಕೈಗಾರಿಕಾ ಬೆಳವಣಿಗೆಯನ್ನು ವೇಗಗೊಳಿಸುವ ಮಹತ್ವದ ಅವಕಾಶ ಒದಗಿಸುತ್ತದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಯುರೋಪಿಯನ್ ಮಾರುಕಟ್ಟೆಗಳಿಗೆ ಆದ್ಯತಾ ಪ್ರವೇಶವು ಬೆಂಗಳೂರು–ತುಮಕೂರು ಪ್ರದೇಶದಿಂದ ರಫ್ತುಗಳನ್ನು ಹೆಚ್ಚಿಸುತ್ತದೆ ಎಂದು ನಿರೀಕ್ಷಿಸಲಾಗಿದೆ. ಈ ಒಪ್ಪಂದವು ಕರ್ನಾಟಕವು ಜಾಗತಿಕ ವ್ಯಾಪಾರ ಸಂಪರ್ಕಗಳನ್ನು ಸುಸ್ಥಿರ ರಫ್ತು, ಹೆಚ್ಚಿನ ಹೂಡಿಕೆ ಮತ್ತು ಉದ್ಯೋಗ ಸೃಷ್ಟಿಯಾಗಿ ಪರಿವರ್ತಿಸಲು ಉತ್ತಮ ವೇದಿಕೆ ಕಲ್ಪಿಸಿಕೊಡುತ್ತದೆ ಎಂದು ಸಚಿವ ಪ್ರಲ್ಹಾದ ಜೋಶಿ ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ತಿಳಿಸಿದ್ದಾರೆ.

*******

**37 ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ** ಮಾಸಾಚರಣೆ ಅಂಗವಾಗಿ, ಕೊಪ್ಪಳದಲ್ಲಿ ಜಾಥಾ ಕಾರ್ಯಕ್ರಮ ಆಯೋಜಿಸಲಾಗಿತ್ತು. ರಸ್ತೆ ನಿಯಮಗಳ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಆಯೋಜಿಸಿದ್ದ ಜಾಥಾಗೆ ಗವಿಸಿದ್ದೇಶ್ವರ ಸ್ವಾಮೀಜಿ ಹಾಗೂ ಜಿಲ್ಲಾಧಿಕಾರಿ ಡಾಕ್ಟರ ಸುರೇಶ. ಇಟ್ನಾಳ ಜಂಟಿಯಾಗಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ, ಐ.ಆರ್.ಸಿ– ಭಾರತೀಯ ರಸ್ತೆ ಕಾಂಗ್ರೆಸ್ ನಿಯಮ ಪ್ರಕಾರ, ರಸ್ತೆ ಸುರಕ್ಷತೆಗೆ ಜಿಲ್ಲೆಯಲ್ಲಿ ಅಪಘಾತ ವಲಯಗಳನ್ನು ಗುರುತಿಸಿ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

**ಸುರೇಶ ಬಿ. ಇಟ್ನಾಳ್ ಧ್ವನಿ 39 ಸೆಕೆಂಡ್**

*******

**ಅರಬ್ಬೀ ಸಮುದ್ರದಲ್ಲಿ** ಇದೇ 31 ರವರೆಗೆ ಭಾರೀ ಗಾಳಿ ಬೀಸುವ ಸಾಧ್ಯತೆ ಇದ್ದು, ಕಡಲು ಪ್ರಕ್ಷುಬ್ಧವಾಗಿರಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಸಂದರ್ಭದಲ್ಲಿ ಮೀನುಗಾರರು ಮೀನುಗಾರಿಕೆಗೆ ತೆರಳದೆ ಮುನ್ನೆಚ್ಚರಿಕೆ ವಹಿಸಬೇಕು. ಯಾವುದೇ ಅನಾಹುತ ಸಂಭವಿಸುವದನ್ನು ತಡೆಯುವ ಸಲುವಾಗಿ ನಾಡದೋಣಿ ಮೀನುಗಾರರು ಸೇರಿದಂತೆ ಎಲ್ಲಾ ಮೀನುಗಾರರು ಜಾಗರೂಕತೆಯಿಂದ ಇರಬೇಕು ಎಂದು ದಕ್ಷಿಣ ಕನ್ನಡ ಜಿಲ್ಲಾ ಮೀನುಗಾರಿಕಾ ಜಂಟಿ ನಿರ್ದೇಶಕರು ಎಚ್ಚರಿಕೆ ನೀಡಿದ್ದಾರೆ.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ರಾಜ್ಯದಲ್ಲಿ ಅಪರಾಧಗಳನ್ನು** ನಿಯಂತ್ರಿಸಲು ಸರ್ಕಾರದಿಂದ ಅಗತ್ಯ ಕ್ರಮ–ಗೃಹ ಸಚಿವರಿಂದ ವಿಧಾನಸಭೆಯಲ್ಲಿ ಹೇಳಿಕೆ.

**ಕಲಬುರಗಿ ಜಿಲ್ಲೆಯ ಸಮಗ್ರ** ಅಭಿವೃದ್ಧಿಗೆ 296 ಕೋಟಿ ವೆಚ್ಚದ ನೀಲನಕ್ಷೆ ಸಿದ್ಧ–ಜಿಲ್ಲಾ ಉಸ್ತುವಾರಿ ಸಚಿವರಿಂದ ಮಾಹಿತಿ.

**ತೋಟಗಾರಿಕಾ ಬೆಳೆಗಳು** ಬೇಗನೆ ಹಾಳಾಗುವುದನ್ನು ತಪ್ಪಿಸಲು ಶೈತ್ಯಾಗಾರ ಘಟಕಗಳ ನಿರ್ಮಾಣಕ್ಕೆ ಉತ್ತೇಜನ-ಕೃಷಿ ಸಚಿವರ ಹೇಳಿಕೆ.

**ಭಾರತ-ಯುರೋಪ್ ಒಕ್ಕೂಟ** ಮುಕ್ತ ವ್ಯಾಪಾರ ಒಪ್ಪಂದ: ರಾಜ್ಯದ ಕೈಗಾರಿಕಾ ಬೆಳವಣಿಗೆಗೆ ಮಹತ್ವದ ಅವಕಾಶ-ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅಭಿಮತ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

**********